ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) -

43 (212) ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೀದರ್ ಜಿಲ್ಲೆಯ ರೇಷ್ಮೆ ಇಲಾಖೆಯಲ್ಲಿ ಒಟ್ಟು 53 ಹುದ್ದೆಗಳು (ಹೊಸ ತಾಲ್ಲೂಕು ಸೇರಿ) ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳನ್ನು ಭರ್ತಿ ಮಾಡುವುದು ಯಾವಾಗ ;

(ಆ) ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಉತ್ಪಾದನೆಗೆ ಫಲವತ್ತಾದ ವಾತಾವರಣವಿದ್ದು ಹೆಚ್ಚಿನ ಗಮನವಹಿಸುವುದು ಅವಶ್ಯಕತೆ ಇರುವುದರಿಂದ ಇಲ್ಲಿ ರೇಷ್ಮೆಅಭಿವೃದ್ಧಿಗಾಗಿ ರೇಷ್ಮೆ ಸಂಶೋಧನಾ ಕೇಂದ್ರ ಅಭಿವೃದ್ಧಿಗೊಳಿಸುವ ಬಗ್ಗೆ ಸರ್ಕಾರದ ಯೋಜನೆ ಇದೆಯೇ ; ಇದ್ದಲ್ಲಿ ಯಾವಾಗ ; ಇಲ್ಲದಿದ್ದರೆ ಕಾರಣವೇನು ?